ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು

ಸಂಖ್ಯೆ: ಪಪೂಶಿಇ/ಶೈ.ಶಾ./ದಾ.ವೇ.ಶೈ.ಚ./2019-20 ದಿನಾಂಕ:25-02-2020

# ಜ್ಞಾಪನ

ವಿಷಯ: 2019-20ನೇ ಶೈಕ್ಷಣಿಕ ಸಾಲಿನ ಕೊನೆಯ ಕಾರ್ಯ ನಿರ್ವಹಿಸುವ ದಿನಾಂಕ ಹಾಗೂ 2020-21ನೇ ಶೈಕ್ಷಣಿಕ ಸಾಲಿನ ಕಾಲೇಜು ಆರಂಭದ ದಿನಾಂಕ ಬದಲಾವಣೆಯಾಗಿರುವ ಬಗ್ಗೆ.

ಉಲ್ಲೇಖ: (1) ಸರ್ಕಾರದಿಂದ ಅನುಮೋದಿತ ಏಕ ಕಡತದ ಸಂಖ್ಯೆ: ಪಪೂಶಿಇ/ಶೈ.ಶಾ.04/ದಾ.ವೇ.ಶೈ.ಚ/2017-18

(2) 2019-20ನೇ ಸಾಲಿನ ದಾಖಲಾತಿ ಮಾರ್ಗಸೂಚಿ.

***

ಪ್ರಸ್ತಾವನೆ:

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಗಳಿಗೆ ಸಂಬಂಧಿಸಿದಂತೆ, 2019-20ನೇ ಸಾಲಿನ ಶೈಕ್ಷಣಿಕ ದಾಖಲಾತಿ ಮಾರ್ಗಸೂಚಿಯಲ್ಲಿ ತಿಳಿಸಿರುವಂತೆ, ದಿನಾಂಕ: **19-03-2020** ರಂದು ಪ್ರಥಮ ಪಿಯುಸಿ ವಾರ್ಷಿಕ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಎಂದು ಹಾಗೂ ದಿನಾಂಕ: **20-03-2020** ರಿಂದ ಬೇಸಿಗೆ ರಜೆ ಆರಂಭವಾಗುತ್ತದೆ ಎಂದು ತಿಳಿಸಲಾಗಿತ್ತು. ಆದರೆ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ದಿನಾಂಕ: **23-03-2020** ರವರೆಗೂ ನಡೆಯಲಿರುವ ಹಿನ್ನೆಲೆಯಲ್ಲಿ ಈ ಕೆಳಗೆ ನಮೂದಿಸಿರುವ ಬದಲಾವಣೆಗಳನ್ನು ರಾಜ್ಯದ ಎಲ್ಲಾ 32 ಶೈಕ್ಷಣಿಕ ಜಿಲ್ಲೆಗಳ ಜಿಲ್ಲಾ ಉಪ ನಿರ್ದೇಶಕರು ಮತ್ತು ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತರಬೇಕಾಗಿರುತ್ತದೆ.

ಆದೇಶ:

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, 2019-20ನೇ ಶೈಕ್ಷಣಿಕ ಸಾಲಿನ ಕೊನೆಯ ಕಾರ್ಯ ನಿರ್ವಹಿಸುವ ದಿನ ಹಾಗೂ 2020-21ನೇ ಶೈಕ್ಷಣಿಕ ಸಾಲಿನ ಕಾಲೇಜು ಆರಂಭದ ದಿನವನ್ನು ಈ ಕೆಳಗೆ ತಿಳಿಸಿದ ಪಟ್ಟಿಯಂತೆ ರಾಜ್ಯದ ಎಲ್ಲಾ 32 ಶೈಕ್ಷಣಿಕ ಜಿಲ್ಲೆಗಳ ಜಿಲ್ಲಾ ಉಪ ನಿರ್ದೇಶಕರು ಮತ್ತು ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳು ಅನುಸರಿಸಲು ಆದೇಶಿಸಿದೆ.

| ಕ್ರಮ ಸಂಖ್ಯೆ | ವಿವರ | ದಿನಾಂಕ | ಷರಾ |
|---|---|---|---|
| 1 | 2019-20ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿಯುಸಿ ವಾರ್ಷಿಕ ಪರೀಕ್ಷಾ ಫಲಿತಾಂಶ ಪ್ರಕಟಣೆ | 27-03-2020 | ಜಿಲ್ಲಾ ಉಪನಿರ್ದೇಶಕರಿಂದ ಅನುಮೋದನೆಗೊಂಡ ಫಲಿತಾಂಶ ಪಟ್ಟಿಯನ್ನು ಮಾತ್ರ ಪ್ರಕಟಿಸುವುದು. |
| 2 | 2019-20ನೇ ಶೈಕ್ಷಣಿಕ ಸಾಲಿನ ಕೊನೆಯ ಕಾರ್ಯ ನಿರ್ವಹಿಸುವ ದಿನ | 27-03-2020 | ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳು ಅನುಸರಿಸುವುದು. |
| 3 | 2019-20ನೇ ಶೈಕ್ಷಣಿಕ ಸಾಲಿನ ಬೇಸಿಗೆ ರಜೆ | 28-03-2020 ರಿಂದ 17-05-2020 ರವರೆಗೆ (ಎರಡೂ ದಿನಗಳನ್ನು ಒಳಗೊಂಡಂತೆ) | ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳು ಅನುಸರಿಸುವುದು. |
| 4 | 2020-21ನೇ ಶೈಕ್ಷಣಿಕ ಸಾಲಿನ ಕಾಲೇಜು ಆರಂಭದ ದಿನ | 18-05-2020 (ಸೋಮವಾರ) | * ಸದರಿ ದಿನದಂದು ದ್ವಿತೀಯ ಪಿಯುಸಿ ತರಗತಿಗಳು ಪ್ರಾರಂಭವಾಗುತ್ತದೆ.<br>* ಎಸ್.ಎಸ್.ಎಲ್.ಸಿ. ಅಥವಾ 10ನೇ ತರಗತಿ ಫಲಿತಾಂಶ ಪ್ರಕಟಿಸಲಾಗಿದ್ದರೆ, ಫಲಿತಾಂಶ ಪ್ರಕಟಣೆಯ ದಿನಾಂಕದ ಮಾರನೇ ದಿನದಿಂದ ಪ್ರಥಮ ಪಿಯುಸಿ ಪ್ರವೇಶಾತಿ ಪ್ರಕ್ರಿಯೆ ಆರಂಭವಾಗುತ್ತದೆ. |

ವಿಶೇಷ ಸೂಚನೆ:

(1) ಈ ಮಾಹಿತಿಗಳನ್ನು ಎಲ್ಲಾ ಕಾಲೇಜುಗಳ ಸೂಚನಾ ಫಲಕದಲ್ಲಿ (**Notice Board**) ಕಡ್ಡಾಯವಾಗಿ ಪ್ರಕಟಿಸಬೇಕು.

(2) 2020-21ನೇ ಸಾಲಿನ ದಾಖಲಾತಿ, ಸಾಂಸ್ಕೃತಿಕ ಹಾಗೂ ಇತರೆ ಚಟುವಟಿಕೆಗಳ ವೇಳಾಪಟ್ಟಿಯನ್ನು ಮುಂದಿನ ದಿನಗಳಲ್ಲಿ ಪ್ರಕಟಿಸಲಾಗುವುದು.

ನಿರ್ದೇಶಕರು

ಪದವಿ ಪೂರ್ವ ಶಿಕ್ಷಣ ಇಲಾಖೆ

ಪ್ರತಿಗಳನ್ನು:

1. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ, ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ – ತಮ್ಮ ಜಿಲ್ಲಾ ವ್ಯಾಪ್ತಿಗೆ ಒಳಪಡುವ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತರಲು ಸೂಚಿಸಿದೆ.
2. ರಾಜ್ಯದ ಎಲ್ಲಾ ಜಿಲ್ಲೆಗಳ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಸಂಬಂಧಿಸಿದ ಜಿಲ್ಲಾ ಉಪನಿರ್ದೇಶಕರುಗಳ ಮೂಲಕ.
3. ಮಾನ್ಯ ನಿರ್ದೇಶಕರ ಆಪ್ತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಬೆಂಗಳೂರು ಇವರ ಮಾಹಿತಿಗಾಗಿ
4. ಇ–ಆಡಳಿತ ಶಾಖೆ, ಪಪೂಶಿಇ, ಬೆಂಗಳೂರು–ಇವರಿಗೆ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಹಾಗೂ ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ ಇ–ಮೇಲ್ ಮೂಲಕ ರವಾನಿಸಲು.
5. ಕಚೇರಿ ಪ್ರತಿ.